**ಕರ್ನಾಟಕ ಸರ್ಕಾರ**

ಕ್ರಮಾಂಕ: ಇಡಿ 67 ಯುಟಿವಿ 2015

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ 29-06-2015.

ಇಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ),
ಬೆಂಗಳೂರು - 560 001.

**ಇವರಿಗೆ:**

ಕುಲಸಚಿವರು,
ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ,
ಬೆಳಗಾವಿ.

ಮಾನ್ಯರೇ,

ವಿಷಯ: ಬೆಂಗಳೂರಿನ ನಾಗಾರ್ಜುನ ಕಾಲೇಜ್ ಆಫ್ ಇಂಜಿನೀಯರಿಂಗ್ ಅಂಡ್ ಟೆಕ್ನಾಲಜಿಗೆ ಸ್ವಾಯತ್ತತೆ ಮಾನ್ಯತೆ ನೀಡುವ ಬಗ್ಗೆ.

ಉಲ್ಲೇಖ: ತಮ್ಮ ಪತ್ರ ಸಂ.VTU/Aca/2014-15/A-II/12296, ದಿ: 16-03-2015

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿನ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದೆ. ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಅಧಿನಿಯಮ 1994ರ ಪ್ರಕರಣ 43ಎ(1)ರನ್ವಯ ಹಾಗೂ Standing Committeeಯಲ್ಲಿ ತೆಗೆದುಕೊಂಡ ತೀರ್ಮಾನದನ್ವಯ ಸರ್ಕಾರವು ಈ ಕೆಳಕಂಡ ಷರತ್ತುಗಳಿಗೊಳಪಟ್ಟು **ಬೆಂಗಳೂರಿನ ನಾಗಾರ್ಜುನ ಕಾಲೇಜ್ ಆಫ್ ಇಂಜಿನೀಯರಿಂಗ್ ಅಂಡ್ ಟೆಕ್ನಾಲಜಿಗೆ** ಸ್ವಾಯತ್ತತೆಗೆ ಅನುಮೋದನೆ ನೀಡಲಾಗಿದೆ ಎಂದು ತಮಗೆ ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

1. ಸದರಿ ಕಾಲೇಜಿಗೆ ಯುಜಿಸಿಯಿಂದ ಸಹ ಸಹಮತಿ ಪಡೆಯತಕ್ಕದ್ದು;
2. ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯವು ಸ್ವಾಯತ್ತತಾ ಮಾನ್ಯತೆಗೆ ಸಂಬಂಧಿಸಿದಂತೆ, ಹೊರಡಿಸಿರುವ ಆದೇಶ/ಪರಿನಿಯಮಾವಳಿಯಲ್ಲಿ ತಿಳಿಸಿರುವ ಎಲ್ಲಾ ನಿಯಮಗಳನ್ನು ಕಟ್ಟು-ನಿಟ್ಟಾಗಿ ಪಾಲಿಸತಕ್ಕದ್ದು.
3. ವಿದ್ಯಾರ್ಥಿಗಳ ಹಿತದೃಷ್ಟಿ ಹಾಗೂ ಶೈಕ್ಷಣಿಕ ಗುಣಮಟ್ಟ ಕಾಪಾಡುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಲಾಗುತ್ತಿದೆಯೇ ಎಂಬ ಬಗ್ಗೆ ವಿಶ್ವವಿದ್ಯಾಲಯವು ಕಾಲ-ಕಾಲಕ್ಕೆ ಪರಿಶೀಲಿಸತಕ್ಕದ್ದು.

ತಮ್ಮ ನಂಬುಗೆಯ,

**(ಸಂಧ್ಯಾ ಎಲ್. ನಾಯಕ್)**
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು).

ಪ್ರತಿ:
ಪ್ರಾಂಶುಪಾಲರು, ನಾಗಾರ್ಜುನ ಕಾಲೇಜ್ ಆಫ್ ಇಂಜಿನೀಯರಿಂಗ್ ಅಂಡ್ ಟೆಕ್ನಾಲಜಿ, ಮುದುಗುರ್ಕಿ, ವೆಂಕಟಗಿರಿ ಕೋಟೆ, ದೇವನಹಳ್ಳಿ, ಬೆಂಗಳೂರು - 562 110.